# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1625
ಮಾನ್ಯ ಸದಸ್ಯರ ಹೆಸರು : ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 19.12.2025
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿನ ಡಾ:ಬಿ.ಆರ್ ಅಂಬೇಡ್ಕರ್ ವಸತಿ ಶಾಲೆ/ ಮೊರಾರ್ಜಿ ವಸತಿ ಶಾಲೆ/ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; | ಹೌದು, |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ 19860 (9261- ಬೋಧಕ, 2386-ಬೋಧಕೇತರ, 8213-ಗ್ರೂಪ್-ಡಿ) ಬೋಧಕ, ಬೋಧಕೇತರ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳು ಮಂಜೂರಾಗಿರುತ್ತವೆ. ಈ ಪೈಕಿ 5456 ಬೋಧಕರು 1127 ಬೋಧಕೇತರ ಖಾಯಂ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಖಾಲಿ ಇರುವ ಹುದ್ದೆಗಳ ಎದುರಾಗಿ ಜಿಲ್ಲಾ ಹಂತದಲ್ಲಿ ಅತಿಥಿ ಶಿಕ್ಷಕರನ್ನು ಹೊರಸಂಪನ್ಮೂಲ ಏಜೆನ್ಸಿ ಮೂಲಕ ಶಿಕ್ಷಕರು/ಬೋಧಕೇತರ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಪಡೆದು ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿದೆ ಹಾಗೂ ಗ್ರೂಪ್-ಡಿ ವೃಂದದ ಹುದ್ದೆಗಳನ್ನು ಜಿಲ್ಲಾ ಹಂತದಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸೇವೆಯನ್ನು ಪಡೆಯಲಾಗುತ್ತಿದೆ.

ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಮಂಜೂರಾಗಿರುವ ವಸತಿ ಶಾಲೆ/ ಕಾಲೇಜುಗಳ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ | ಜಿಲ್ಲೆ | ಮಂಜೂರಾಗಿರುವ ಶಾಲೆ/ ಕಾಲೇಜುಗಳ ಸಂಖ್ಯೆ | ಮಂಜೂರಾಗಿರುವ ಬೋಧಕ/ ಭೋಧಕೇತರ ಹುದ್ದೆಗಳು | ಬೋಧಕ ಹುದ್ದೆಗಳು | ಬೋಧಕೇತರ ಹುದ್ದೆಗಳು | ಖಾಯಂ ಶಿಕ್ಷಕರ ಸಂಖ್ಯೆ | ಅತಿಥಿ ಶಿಕ್ಷಕರ ಸಂಖ್ಯೆ |
|---|---|---|---|---|---|---|---|
| 1 | ಮೈಸೂರು | 39 | 888 | 413 | 475 | 189 | 224 |
| 2 | ಚಾಮರಾಜನಗರ | 21 | 488 | 227 | 261 | 96 | 131 |
| | **ಒಟ್ಟು** | **60** | **1376** | **640** | **736** | **285** | **355** |

ಖಾಲಿ ಇರುವ ಹುದ್ದೆಗಳ ಎದುರಾಗಿ ಜಿಲ್ಲಾ ಹಂತದಲ್ಲಿ ಅತಿಥಿ ಶಿಕ್ಷಕರು/ಹೊರಸಂಪನ್ಮೂಲ ಏಜೆನ್ಸಿ ಮೂಲಕ ಶಿಕ್ಷಕರು/ ಬೋಧಕೇತರ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಪಡೆದು ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿದೆ. ಗ್ರೂಪ್-ಡಿ ವೃಂದದ ಹುದ್ದೆಗಳನ್ನು ಜಿಲ್ಲಾ ಹಂತದಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸೇವೆಯನ್ನು ಪಡೆಯಲಾಗುತ್ತಿದೆ.

ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ 2756 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ, ಆರ್ಥಿಕ ಇಲಾಖೆಯು 875 ಬೋಧಕ/ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮೋದನೆ ನೀಡಿರುತ್ತದೆ.

ಉಳಿಕೆ ಮೂಲ ವೃಂದದ 875 ಮತ್ತು ಕಲ್ಯಾಣ ಕರ್ನಾಟಕ ವೃಂದದ 780 ಹುದ್ದೆಗಳು ಸೇರಿದಂತೆ ಒಟ್ಟು 1655 ಬೋಧಕ/ಬೋಧಕೇತರ ಹುದ್ದೆಗಳನ್ನು ನಿಯಮಾನುಸಾರ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಮುಖಾಂತರ ನೇರ ನೇಮಕಾತಿಗೆ ಕ್ರಮವಹಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

| | | |
|---|---|---|
| ಆ) | ಈ ವಸತಿ ಶಾಲೆಗಳ ಪ್ರವೇಶಕ್ಕೆ ಒತ್ತಡವಿರುವುದನ್ನು ಸರ್ಕಾರ ಮನಗಂಡಿದೆಯೇ; ಹಾಗಿದ್ದಲ್ಲಿ, ಒತ್ತಡವನ್ನು ತಗ್ಗಿಸಲು ಮುಂದಿನ ದಿನಗಳಲ್ಲಿ ಕೈಗೊಳ್ಳಬಹುದಾದ ಕ್ರಮಗಳೇನು? | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಯಲ್ಲಿ ಜಿಲ್ಲೆಯನ್ನು ಒಂದು ಘಟಕವನ್ನಾಗಿ ಪರಿಗಣಿಸಿ ರಾಜ್ಯದ ಎಲ್ಲಾ ತಾಲ್ಲೂಕಿನ ಸ್ಥಳೀಯ ಅಭ್ಯರ್ಥಿಗಳಿಗೆ ಶೇ.75ರಷ್ಟು ಹಾಗೂ ಅದೇ ಜಿಲ್ಲೆಯ ಇತರೆ ತಾಲ್ಲೂಕಿನ ಅಭ್ಯರ್ಥಿಗಳಿಗೆ ಶೇ.25ರಷ್ಟು ಮೀಸಲಾತಿವಾರು ಸೀಟುಗಳನ್ನು ಹಂಚಿಕೆ ಮಾಡುವ ಮೂಲಕ ದಾಖಲಾತಿ ಪ್ರಕ್ರಿಯೆ ಕೈಗೊಳ್ಳಲಾಗಿರುತ್ತದೆ. ಪ್ರವೇಶ ಪರೀಕ್ಷೆ ಇಲ್ಲದೇ ನೇರ ಪ್ರವೇಶಾತಿ ಮೂಲಕ ಸಫಾಯಿ ಕರ್ಮಚಾರಿ/ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ ಸ್ಮಶಾನ ಕಾರ್ಮಿಕರ ಮಕ್ಕಳು, ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು/ ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು, ಸಂಚಾರಿ ಕುರಿಗಾಹಿಗಳ ಮಕ್ಕಳು 25% ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು/ ಹೆಚ್.ಐ.ವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು, ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತೀ ಸೂಕ್ಷ್ಮ ಸಮುದಾಯದ/ ಸೈನಿಕರು ಮತ್ತು ಮಾಜಿ ಸೈನಿಕರು/ ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ನೀಡಲಾಗುತ್ತದೆ. ಉಳಿದ ಶೇ.50 ರಷ್ಟು ಸೀಟುಗಳನ್ನು ಪ್ರವೇಶ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳು, ಅನ್ವಯಿಸುವ ಮೀಸಲಾತಿ ಮತ್ತು ಶಾಲಾ ಆದ್ಯತೆಯ ಮೇಲೆ ಸೀಟು ಹಂಚಿಕೆ ಮಾಡಿ 6 ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯ ಮಿತಿಯನ್ನು ಹೆಚ್ಚಿಸುವ ಸಂಬಂಧ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ, ಆರ್ಥಿಕ ಇಲಾಖೆಯು ಆಯವ್ಯಯ ತಯಾರಿಕಾ ಸಂದರ್ಭದಲ್ಲಿ ಪ್ರಸ್ತಾವನೆಯನ್ನು ಮಂಡಿಸುವಂತೆ ತಿಳಿಸಿರುತ್ತದೆ. ಅದರಂತೆ ಪ್ರಸ್ತಾವನೆಯನ್ನು ಮಂಡಿಸಲಾಗಿ ಆರ್ಥಿಕ ಇಲಾಖೆಯು ಸದರಿ ಪ್ರಸ್ತಾವನೆಯನ್ನು ಪರಿಗಣಿಸಿರುವುದಿಲ್ಲ.<br><br>2024-25ನೇ ಸಾಲಿನ ಆಯವ್ಯಯದಲ್ಲಿ ವಸತಿ ಶಾಲೆಗಳು ಇಲ್ಲದಿರುವ ಹೋಬಳಿಗಳಲ್ಲಿ 16 ಪರಿಶಿಷ್ಟ ಜಾತಿ, 04 ಪರಿಶಿಷ್ಟ ಪಂಗಡ ಒಳಗೊಂಡಂತೆ ಒಟ್ಟು 20 ಹೊಸ ವಸತಿ ಶಾಲೆಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೂಲಕ ಪ್ರಾರಂಭಿಸಲು ಅನುಮೋದನೆ ನೀಡಲಾಗಿದ್ದು, 2025-26ನೇ ಸಾಲಿನ ಶೈಕ್ಷಣಿಕ ವರ್ಷದಿಂದಲೇ ಸದರಿ 20 ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿರುತ್ತದೆ.<br><br>ಅದರಂತೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೂಲಕ ಪ್ರಾರಂಭಿಸಲು ವಸತಿ ಶಾಲೆಗಳ ಹೆಸರು, ಪ್ರವರ್ಗವಾರು ಶಾಲೆಗಳ ವರ್ಗೀಕರಣ ಮಾಡಿ ಪ್ರತಿ ಶಾಲೆಯ ತರಗತಿವಾರು 50 ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ಅಗತ್ಯ ಹುದ್ದೆಗಳೊಂದಿಗೆ ಮಂಜೂರು ಮಾಡಿ ಅನುಮೋದನೆ ನೀಡಿದ್ದು, 2025-26ನೇ ಸಾಲಿನ ಶೈಕ್ಷಣಿಕ ವರ್ಷದಿಂದಲೇ ಸದರಿ 26 ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿರುತ್ತದೆ ಹಾಗೂ ವಸತಿ ಶಾಲೆಗಳಿಲ್ಲದ ಹೋಬಳಿಗಳಿಗೆ ಹೊಸ ವಸತಿ ಶಾಲೆಗಳನ್ನು ಅನುದಾನ ಲಭ್ಯತೆಯನ್ನಾಧರಿಸಿ, ಹಂತ ಹಂತವಾಗಿ ಪ್ರಾರಂಭಿಸಲು ಕ್ರಮವಹಿಸಲಾಗುವುದು. |

ಸಕಇ/291/ಎಂಡಿಎಸ್/2025

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು